ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **:** -

ಅ) 201819ನೇ ಸಾಲಿನಲ್ಲಿ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರಕ್ಕೆ 3054 ಅನುದಾನದಡಿ ಮೊದಲನೇ ಹಂತದಲ್ಲಿ ಅಂದಾಜು ಮೊತ್ತ ರೂ 200.00 ಲಕ್ಷಗಳ 10 ಕಾಮಗಾರಿ ಹಾಗೂ ಎರಡನೇ ಹಂತದಲ್ಲಿ ಅಂದಾಜು ಮೊತ್ತ ರೂ. 700 ಲಕ್ಷಗಳ 13 ಕಾಮಗಾರಿಗಳಿಗೆ ದಿನಾಂಕ:12022019 ರಂದು ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದರೂ ಸಹ ಪ್ರಸ್ತುತದವರೆಗೆ ಕಾಮಗಾರಿಗಳ ಅನುಷ್ಠಾನಕ್ಕಾಗಿ ಹಣ ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗುವುದು; (ವಿವರ ನೀಡುವುದು)

ಇ) ಈ ವಿಧಾನಸಭಾ ಕ್ಷೇತ್ರದ ರಸ್ತೆಗಳು ತೀವ್ರವಾಗಿ ಹದಗೆಟ್ಟಿರುವುದರಿಂದ ಗ್ರಾಮೀಣ ರಸ್ತೆಗಳ ಸುಧಾರಣೆಗಾಗಿ ರೂ.50.00 ಕೋಟಿಗಳ ವಿಶೇಷ ಅನುದಾನ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದೇ; (ವಿವರ ನೀಡುವುದು)

ಈ)201819ನೇ ಸಾಲಿನಲ್ಲಿ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರಕ್ಕೆ 3054 ಟಾಸ್ಕ್ ಫೋರ್ಸ್ ಅನುದಾನದಡಿ ಅಂದಾಜು ಮೊತ್ತ ರೂ 58.50 ಲಕ್ಷಗಳ 16 ಕಾಮಗಾರಿಗಳು ಭೌತಿಕವಾಗಿ ಪೂರ್ಣಗೊಂಡರೂ ಸಹ ಪ್ರಸ್ತುತದವರೆಗೆ ಸರ್ಕಾರದಿಂದಹಣ ಬಿಡುಗಡೆಯಾಗದಿರುವುದರಿಂದ ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದೇ?

----

15/4/1456

**ಅನುದಾನ ಬಿಡುಗಡೆ**

1216 **ಬಿ. ನಾರಾಯಣ್‌ರಾವ್ (ಬಸವಕಲ್ಯಾಣ):**

ಮಾನ್ಯ **ಸಣ್ಣ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **:** -

ಅ) ಸಣ್ಣ ನೀರಾವರಿ ಇಲಾಖೆಯಲ್ಲಿರುವ ವಿವಿಧ ಅಭಿವೃದ್ಧಿ ಯೋಜನೆಗಳು ಯಾವುವು; (ಯೋಜನಾವಾರು ವಿವರ ನೀಡುವುದು)

ಆ) ಹೊಸ ಸರ್ಕಾರ ಅಸ್ಥಿತ್ವಕ್ಕೆ ಬಂದಾಗಿನಿಂದ ಇಲ್ಲಿಯವರೆವಿಗೂ ಬೀದರ ಜಿಲ್ಲೆ ಬಸವಕಲ್ಯಾಣ ವಿಧಾನಸಭೆ ಕ್ಷೇತ್ರಕ್ಕೆ ವಿವಿಧ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು; (ವಿವಿಧಢ ಯೋಜನಾವಾರು ಕಾಮಗಾರಿಗಳಿಗೆ ಬಿಡುಗಡೆಯಾದ ಮಾಹಿತಿ ನೀಡುವುದು)

ಇ) ಕಳೆದ 3 ವರ್ಷಗಳಲ್ಲಿ ಬಸವಕಲ್ಯಾಣ ತಾಲ್ಲೂಕಿನಲ್ಲಿ ವಿವಿಧ ಯೋಜನೆಯಡಿ ಎಷ್ಟು ಏತ ನೀರಾವರಿ ಯೋಜನೆಗಳನ್ನು ಮಂಜೂರು ಮಾಡಲಾಗಿದೆ? (ಫಲಾನುಭವಿಗಳ ವಿವರ ನೀಡುವುದು)

----

15/4/1457

**ವಾರ್ಷಿಕ ಕಾಮಗಾರಿಗಳು**

1217 **ಬಿ. ನಾರಾಯಣ್‌ರಾವ್ (ಬಸವಕಲ್ಯಾಣ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು

ತಿಳಿಸುವರೆ : -

ಅ) ಬೀದರ್ ಜಿಲ್ಲೆ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇಂಜಿನಿಯರಿಂಗ್ ವಿಭಾಗದಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳು/ಯೋಜನೆಗಳಾವುವು; (ಮಾಹಿತಿ ನೀಡುವುದು)

ಆ) ಸದರಿ ಯೋಜನೆಗಳಿಗೆ/ಕಾಮಗಾರಿಗಳಿಗೆ ಮಂಜೂರು ಮಾಡಿದ ಅನುದಾನವೆಷ್ಟು; ಸದರಿ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ; (ವರ್ಷವಾರು, ಕಾಮಗಾರಿವಾರು, ಯೋಜನಾವಾರು ಸಂಪೂರ್ಣ ಮಾಹಿತಿ ನೀಡುವುದು)

ಇ) ಕಳೆದ ಎರಡು ವರ್ಷಗಳಲ್ಲಿ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ಎಸ್.ಸಿ.ಪಿ./ಟಿ.ಎಸ್.ಪಿ. ಅಡಿಯಲ್ಲಿ ನೀಡಿರುವ ಅನುದಾನವೆಷ್ಟು? (ಇಲಾಖಾ ವತಿಯಿಂದ ಕೈಗೊಂಡ ಕಾಮಗಾರಿಗಳ ವಿವರವನ್ನು ವಿವಿಧ ಲೆಕ್ಕ ಶೀರ್ಷಿಕೆವಾರು, ವರ್ಷವಾರು ಮಾಹಿತಿ ನೀಡುವುದು)

----

15/4/1475

**ಗೋದಾವರಿ ನೀರಿನ ಹಂಚಿಕೆ**

1218 **ಬಿ. ನಾರಾಯಣ್‌ರಾವ್ (ಬಸವಕಲ್ಯಾಣ):**

ಮಾನ್ಯ **ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಗೋದಾವರಿ ಕಣಿವೆಯಿಂದ ಪ್ರತಿ ವರ್ಷ ಬೀದರ್ ಜಿಲ್ಲೆಗೆ ಹಂಚಿಕೆಯಾಗುವ ನೀರಿನ ಪ್ರಮಾಣವೆಷ್ಟು; (ವಿವರ ನೀಡುವುದು)

ಆ) ಸದರಿ ಕಣಿವೆಯಿಂದ ಹಂಚಿಕೆಯಾಗುವ ನೀರು ಪೂರ್ಣ ಪ್ರಮಾಣದಲ್ಲಿ ಸದ್ಬಳಕೆಯಾಗುತ್ತಿದೆಯೇ;

ಇ) ಬೀದರ್ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಿಗೆ ಈ ನೀರಿನ ಉಪಯೋಗ ಕಲ್ಪಿಸಿದೆ; (ಸದ್ಯದಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳು ಮತ್ತು ಯೋಜಿತ ಯೋಜನೆಗಳ ವಿವರ ನೀಡುವುದು);

ಈ) ಬೀದರ್ ಜಿಲ್ಲೆ ಬಸವಕಲ್ಯಾಣ ತಾಲ್ಲೂಕಿನ ಚುಳಕಿ ನಾಲೆ ಯೋಜನೆ ಸುಮಾರು 4040 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಒದಗಿಸುವ ಯೋಜನೆಯಾಗಿರುವುದು ನಿಜವೇ; 1979 ರಲ್ಲಿ ಈ ನಾಲೆ ನಿರ್ಮಾಣಗೊಂಡಿದ್ದು ಲೈನಿಂಗ್ ಹಾಳಾಗಿ ಕಾಲುವೆಗಳು ಹೂಳು ತುಂಬಿ ಮುಚ್ಚಿ ಹೋಗಿರುವುದರಿಂದ ನೀರು ಹರಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಸದರಿ ಕಾಲುವೆಗಳ ಸಂಪೂರ್ಣ ದುರಸ್ಥಿ ಕಾರ್ಯ ಕೈಗೊಂಡು ರೈತರ ಜಮೀನುಗಳಿಗೆ ನೀರು ಹರಿಸುವ ಕ್ರಮ ಕೈಗೊಳ್ಳಲಾಗುವುದೇ;

ಊ) ಸದರಿ ಚುಳಕಿ ನಾಲೆ ಜಲಾಶಯದಿಂದ ಬಸವಕಲ್ಯಾಣ ಕ್ಷೇತ್ರದ ಪಟ್ಟಣ ಮತ್ತು ಗ್ರಾಮೀಣ ಪ್ರದೇಶದಹಳ್ಳಿಗಳಿಗೆ ಎಷ್ಟು ಪ್ರಮಾಣದಲ್ಲಿ(ಟಿ.ಎಂ.ಸಿ) ಕುಡಿಯುವ ನೀರು ಹಾಗೂ ರೈತರ ಜಮೀನುಗಳಿಗೆ ನೀರನ್ನು ಹರಿಸಲಾಗುತ್ತಿದೆ; (ವಿವರ ನೀಡುವುದು)

ಋ) ಬಸವಕಲ್ಯಾಣ ತಾಲ್ಲೂಕಿನ ಕಂದಾಯ ದಾಖಲೆಯ ಪ್ರಕಾರ ಜಮೀನು ಎಷ್ಟು ಮತ್ತು ಗೋದಾವರಿ ಕಣಿವೆಯಿಂದ ಸದ್ಯ ನೀರಾವರಿ ಆಗುತ್ತಿರುವ ಯೋಜಿತ ಪ್ರದೇಶದ ಜಮೀನು ಎಷ್ಟು? (ಹಳ್ಳಿಗಳ ಹೆಸರಿನೊಂದಿಗೆ ವಿವರ ನೀಡುವುದು)

----

15/4/784

## ಅಕ್ಷರ ದಾಸೋಹ ಸಹಾಯಕ ನಿರ್ದೇಶಕರ ಹುದ್ದೆ

**1219 ನಿಸರ್ಗನಾರಾಯಣಸ್ವಾಮಿ ಎಲ್.ಎನ್. (ದೇವನಹಳ್ಳಿ):**

ಮಾನ್ಯ **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ರಾಜ್ಯದಲ್ಲಿ ಅಕ್ಷರ ದಾಸೋಹ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಮುಖ್ಯ ಶಿಕ್ಷಕರ ಹುದ್ದೆಯ ತತ್ಸಮಾನದವರು ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ವಿವರ ನೀಡುವುದು);
ಆ) ಹಾಗಿದ್ದಲ್ಲಿ, ಈ ಹುದ್ದೆಗೆ ಬೋಧಕೇತರ ವೃಂದದ ವ್ಯವಸ್ಥಾಪಕರನ್ನು ನೇಮಿಸುವ ಬಗ್ಗೆ ಸರ್ಕಾರದ ನಿಲುವೇನು; ಈ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ (ವಿವರ ನೀಡುವುದು);
ಇ) ಹಾಗಿದ್ದಲ್ಲಿ, ಈ ಹುದ್ದೆಯನ್ನು ಬೋಧಕೇತರ ವೃಂದಕ್ಕೆ ನೀಡುವುದರಿಂದ ಹಾಲಿ ಈ ಹುದ್ದೆಯಲ್ಲಿರುವ ಮುಖ್ಯ ಶಿಕ್ಷಕ ವೃಂದದವರ ಸೇವೆ ಶಾಲೆಗೆ ದೊರಕಲಿದ್ದು, ಮಕ್ಕಳ ಹಿತ ದೃಷ್ಟಿಯಿಂದ ಉಪಯೋಗಕ್ಕೆ ಬರುವುದಿಲ್ಲವೇ; ಈ ಬಗ್ಗೆ ಸರ್ಕಾರದ ನಿಲುವೇನು (ವಿವರ ನೀಡುವುದು)?

----

15/4/1246

## ಶಾಲೆಗಳ ಕೊಠಡಿ

**1220 ಚಂದ್ರಕಾಂತಗೌಡ ಚನ್ನಬಸಪ್ಪಗೌಡ ಪಾಟೀಲ್ (ನರಗುಂದ):**

ಮಾನ್ಯ **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಕಳೆದ 2 ವರ್ಷಗಳಲ್ಲಿ ಗದಗ ಜಿಲ್ಲೆಯ ವ್ಯಾಪ್ತಿಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಶಾಲೆಗಳಲ್ಲಿ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕಾಗಿ ಅವಶ್ಯವಿರುವ ಶಾಲಾ ಕೊಠಡಿಗಳು ಎಷ್ಟು; ಅದರಲ್ಲಿ ಈವರೆಗೆ ನಿರ್ಮಾಣವಾಗಿರುವ ಕೊಠಡಿಗಳು ಎಷ್ಟು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)
ಆ) ಇದರಲ್ಲಿ ಶಿಥಿಲಗೊಂಡ ಶಾಲಾ ಕೊಠಡಿಗಳು ಎಷ್ಟು; ಇವುಗಳ ದುರಸ್ಥಿಗೆ ಕೈಗೊಂಡ ಕ್ರಮಗಳೇನು;
ಇ) ಈ ದುರಸ್ತಿ ಕಾಮಗಾರಿಗಳಿಗೆ ಕಳೆದ 2 ವರ್ಷಗಳಿಂದ ಈವರೆಗೆ ಬಿಡುಗಡೆಗೊಂಡಿರುವ ಅನುದಾನವೆಷ್ಟು? (ವರ್ಷವಾರು ಸಂಪೂರ್ಣ ವಿವರ ನೀಡುವುದು)

----

15/4/1247

## ವಿವಿಧ ಯೋಜನೆಗಳ ಅನುದಾನ

**1221 ಚಂದ್ರಕಾಂತಗೌಡ ಚನ್ನಬಸಪ್ಪಗೌಡ ಪಾಟೀಲ್ (ನರಗುಂದ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಸಮಿಶ್ರ ಸರ್ಕಾರದ ಅವಧಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಗೊಳ್ಳುವ ವಿವಿಧ ಯೋಜನೆಗಳಿಗೆ ನೀಡಿದ ಅನುದಾನವೆಷ್ಟು; (ಜಿಲ್ಲಾವಾರು ವಿವರ ನೀಡುವುದು)
ಆ) ಯಾವ ಯಾವ ಕಾಮಗಾರಿಗಳಿಗೆ ಈ ಅನುದಾನವನ್ನು ವಿನಿಯೋಗಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)
ಇ) ಇದರಲ್ಲಿ ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ ಅನುದಾನದ ಶೇಕಡಾವಾರು ಪ್ರಮಾಣವೆಷ್ಟು;

(ವಿವರ ನೀಡುವುದು)

ಈ) ಗ್ರಾಮೀಣ ಭಾಗದಲ್ಲಿರುವ ರಸ್ತೆಗಳು ಬಹಳಷ್ಟು ಹಾಳಾಗಿರುವುದು, ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

----

15/4/1388

**ಮಕ್ಕಳಿಗೆ ಉಚಿತವಾಗಿ ಸಮವಸ್ತ್ರಗಳನ್ನು ನೀಡುವುದು**

**1222 ಪಿ ರಾಜೀವ್ (ಕುಡುಚಿ):**

ಮಾನ್ಯ **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗೆ ಉಚಿತವಾಗಿ ಸಮವಸ್ತ್ರವನ್ನು ನೀಡಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ, ಸಮವಸ್ತ್ರವನ್ನು ಹೊಲಿಗೆಯೊಂದಿಗೆ ನೀಡಲಾಗುವುದೇ ಅಥವಾ ಬಟ್ಟೆಯನ್ನು ಮಾತ್ರ ನೀಡಲಾಗುತ್ತಿದೆಯೇ;

ಇ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹೆಣ್ಣುಮಕ್ಕಳಿಗೆ ಎಷ್ಟು ಗಾತ್ರದ ಬಟ್ಟೆಯನ್ನು ನೀಡಲಾಗುತ್ತಿದೆ;

ಈ) ಪ್ರತಿ ವಿದ್ಯಾರ್ಥಿಗೆ ಬೇಕಾದ ಗಾತ್ರದ ಬಟ್ಟೆಯನ್ನು ನೀಡದೇ ಅವೈಜ್ಞಾನಿಕವಾಗಿ ಒಂದೇ ಗಾತ್ರದ ಬಟ್ಟೆಯನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಈ ಶಾಲೆಗಳ ಗಂಡು/ಹೆಣ್ಣು ಮಕ್ಕಳಿಗೆ ಸಮವಸ್ತ್ರಕ್ಕಾಗಿ ಪ್ರತಿ ವಿದ್ಯಾರ್ಥಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗುತ್ತಿದೆ;

ಊ) ವಿಶೇಷ ವರ್ಗೀಕರಣದ ಹುದ್ದೆಯಲ್ಲಿರುವ (ಬಿಆರ್‌ಪಿ/ಸಿಆರ್‌ಪಿ)ವರನ್ನು ಕಡ್ಡಾಯ ವರ್ಗಾವಣೆಗಳ ನಿಯಮಕ್ಕೆ ಸೇರಿಸಲಾಗಿದೆಯೇ;

ಋ) ಸಿಆರ್‌ಪಿ/ಬಿಆರ್‌ಪಿಗಳು ಲಿಖಿತ ಪರೀಕ್ಷೆಗಳ ಮೂಲಕ ಆಯ್ಕೆಯಾಗಿ ಸೇವೆಯನ್ನು ಸಲ್ಲಿಸಿರುವುದು ನಿಜವೇ;

ಎ) ಇವರನ್ನು ಕಡ್ಡಾಯ ವರ್ಗಾವಣೆಗೆ ಪರಿಗಣಿಸಿರುವುದು ಸೂಕ್ತವಾಗಿದೆಯೇ;

ಏ) ಇವರನ್ನೂ ಸಹ ಸಾಮಾನ್ಯ ಶಿಕ್ಷಕರೆಂದುಪರಿಗಣಿಸಿ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲು ಇರುವ ತೊಂದರೆಗಳೇನು?

----

15/4/1389

**ಉನ್ನತ ಶಿಕ್ಷಕ್ಕಾಗಿ ಸಾಲ ಪಡೆದಿರುವ ವಿದ್ಯಾರ್ಥಿಗಳು**

**1223 ಪಿ ರಾಜೀವ್ (ಕುಡುಚಿ):**

ಮಾನ್ಯ **ಉನ್ನತ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಕಳೆದ 3 ವರ್ಷಗಳಿಂದ ಕರ್ನಾಟಕ ರಾಜ್ಯದ ಉನ್ನತ ಶಿಕ್ಷಣ ಸಾಲ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ಸಾಲ ಪಡೆದು, ಶಿಕ್ಷಣ ಪೂರೈಸಿದ ವಿದ್ಯಾರ್ಥಿಗಳು ಸಾಲವನ್ನು ಮರುಪಾವತಿಸಲು ಸಾದ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬ್ಯಾಂಕ್‌ಗಳಿಂದ ಶೈಕ್ಷಣಿಕ ಸಾಲ ಪಡೆದು ಶಿಕ್ಷಣ ಪೂರೈಸಿ ಎಲ್ಲಿಯೂ ಉದ್ಯೋಗ ದೊರಕದಿದ್ದಾಗ ಯಾವ ಮೂಲದಿಂದ ಸಾಲವನ್ನು ಭರಿಸಬೇಕಾಗುತ್ತದೆ; ಇದರಿಂದಾಗಿ ಬಹಳಷ್ಟು ಪ್ರತಿಭಾವಂತರು ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಸಾಲ ಪಡೆದ ಪ್ರತಿಭಾವಂತರಿಗೆ ಉದ್ಯೋಗವಕಾಶ ಕಲ್ಪಿಸಲು ಸರಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ?

----

15/4/1390

**ಸ್ವಚ್ಛ ಭಾರತ ಅಭಿಯಾನದಡಿ ಮಾರಬ ಗ್ರಾಮ ಪಂಚಾಯಿತಿಯಲ್ಲಿ ಶೌಚಾಲಯಗಳ ನಿರ್ಮಾಣ**

1224 **ಪಿ ರಾಜೀವ್ (ಕುಡುಚಿ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಕಳೆದ 3 ವರ್ಷಗಳಿಂದ ರಾಯಭಾಗ ತಾಲ್ಲೂಕಿನ ಮೊರಬ ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಛ ಭಾರತ ಅಭಿಯಾನದಡಿ ಎಷ್ಟು ಶೌಚಾಯಲಯಗಳನ್ನು ನಿರ್ಮಿಸಲಾಗಿದೆ;

ಆ) ಶೌಚಾಲಯ ನಿರ್ಮಾಣಕ್ಕಾಗಿ ಪ್ರತಿ ಘಟಕಕ್ಕೆ ಬ್ಯಾಂಕ್‌ನಿಂದ ಸಾಲವನ್ನು ಪಡೆಯಲಾಗಿದೆಯೇ; ಸರ್ಕಾರ ಸಾಲದ ಮರುಪಾವತಿಗೆ ಫಲಾನುಭವಿಗಳಿಗೆ ಮಾಹಿತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಇಂಟರ್‌ನೆಟ್ ಸಂಪರ್ಕ ನೀಡಲಾಗಿದೆಯೇ;

ಈ) ಪ್ರತಿ ತಿಂಗಳು ಗ್ರಾಮ ಪಂಚಾಯಿತಿಯು ಇಂಟರ್‌ನೆಟ್‌ಗಾಗಿ ಭರಣ ಮಾಡುತ್ತಿರುವ ಸರಾಸರಿ ಮೊತ್ತವೆಷ್ಟು;

ಉ) ಈ ಇಂಟರ್‌ನೆಟ್ ಸಂಪರ್ಕವು ಸುವ್ಯವಸ್ಥಿತವಾಗಿ ಕೆಲಸ ನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಬಂದಿದ್ದಲ್ಲಿ, ಈ ಸಂಬಂಧದಲ್ಲಿ ನಿರ್ವಹಿಸುತ್ತಿರುವ ಬಿಎಸ್‌ಎನ್‌ಎಲ್ ಮತ್ತು ಬಿಬಿಎನ್‌ಎಲ್ ಸಂಸ್ಥೆಗಳು ವಿಳಂಬ ನೀತಿ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು?

----

15/4/755

**ಗ್ರಾಮೀಣ ರಸ್ತೆಗಳು**

1225 **ರಾಜ್‌ಕುಮಾರ್ ಪಾಟೀಲ್ (ಸೇಡಂ ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಸೇಡಂ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮೀಣ ರಸ್ತೆಗಳು ದುರಸ್ತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಯಾವ ಯಾವ ಗ್ರಾಮೀಣ ರಸ್ತೆಗಳು ದುರುಸ್ತಿಯಲ್ಲಿವೆ (ಗ್ರಾಮೀಣ ರಸ್ತೆಗಳ ಸಂಪೂರ್ಣ ಮಾಹಿತಿ ನೀಡುವುದು);

ಇ) ದುರಸ್ತಿಯಲ್ಲಿರುವ ರಸ್ತೆಗಳನ್ನು ಅಭಿವೃದ್ಧಿಪಡಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು;

ಈ) ದುರಸ್ತಿಯಲ್ಲಿರುವ ರಸ್ತೆಗಳನ್ನು ಯಾವ ಕಾಲಮಿತಿಯೊಳಗೆ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುವುದು?

----

15/4/782

## ಅಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಯೋಜನೆಯ ಅನುಷ್ಠಾನದ ಮತ್ತು ಸುಳ್ವಾಡಿ ವಿಷ ಪ್ರಾಶಾಣದ ಸಂತ್ರಸ್ಥರ

**1226 ಎಸ್. ಎ. ರಾಮದಾಸ್ (ಕೃಷ್ಣರಾಜ):**

ಮಾನ್ಯ **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಅಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಯೋಜನೆಯ ಕಾರ್ಯ ಪ್ರಗತಿಯೇನು; 2018-19ನೇ ಸಾಲಿನಲ್ಲಿ ಎಷ್ಟು ಜನ ಇದರ ಸೌಲಭ್ಯ ಪಡೆದುಕೊಂಡಿದ್ದಾರೆ; ಈ ನಿಟ್ಟಿನಲ್ಲಿ ಬಿಡುಗಡೆ ಮಾಡಿರುವ ಮೊತ್ತವೆಷ್ಟು; ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಿಗೆ ಬಿಡುಗಡೆ ಮಾಡಿರುವ ಮೊತ್ತವೆಷ್ಟು; ಮೈಸೂರು ಜಿಲ್ಲೆಯಲ್ಲಿ ಯಾವ ಯಾವ ಖಾಸಗಿ ಆಸ್ಪತ್ರೆಗಳಿಗೆ ಚಿಕಿತ್ಸಾ ವೆಚ್ಚ ಬಿಡುಗಡೆ ಮಾಡಲಾಗಿದೇ; (ವಿವರವನ್ನು ನೀಡುವುದು)

ಆ) ಚಾಮರಾಜನಗರ ಜಿಲ್ಲೆಯ ಸುಳ್ವಾಡಿ ವಿಷ ಪ್ರಾಶಾಣ ಸಂತ್ರಸ್ಥರಿಗೆ ಖಾಸಗಿ ಅಸ್ಪತ್ರೆಯಲ್ಲಿ ನೀಡಿದ ಚಿಕಿತ್ಸಾ ವೆಚ್ಚವನ್ನು ಭರಿಸಲಾಗಿದೆಯೇ; ಇದರ ಒಟ್ಟು ಮೊತ್ತವೆಷ್ಟು (ಬಿಡುಗಡೆಯಾದ ವಿವರವನ್ನುನೀಡುವುದು);

ಇ) ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ "ಡಯಾಲಿಸಿಸ್" ಚಿಕಿತ್ಸಾ ಕೇಂದ್ರವನ್ನು ಪ್ರಾರಂಭಿಸುವುದಾಗಿ ಈ ಹಿಂದೆ ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದ್ದು, ಇದರ ಅನುಷ್ಠಾನದ ವಿವರಗಳೇನು; ಎಷ್ಟು ತಾಲ್ಲೂಕು ಕೇಂದ್ರಗಳಲ್ಲಿ ಪ್ರಾರಂಭವಾಗಿದೆ; ಸದರಿ ಚಿಕಿತ್ಸೆಯನ್ನು ಉಚಿತವಾಗಿ ನೀಡಲಾಗುತ್ತಿದೆಯೇ; ಕಳೆದ ಎರಡು ವರ್ಷಗಳಿಂದ ಎಷ್ಟು ಜನ ಇದರ ಪ್ರಯೋಜನವನ್ನು ಪಡೆದಿರುತ್ತಾರೆ(ಯಾದಿಯನ್ನು ನೀಡುವುದು);

ಈ) ಇತ್ತೀಚಿಗೆ ರಾಜ್ಯದಲ್ಲಿ "ಕುಸುಮ ರೋಗಿಗಳ" ಸಂಖ್ಯೆ ಹೆಚ್ಚಾಗುತ್ತಿದ್ದು, ಇದರ ಚಿಕಿತ್ಸೆ ತುಂಬಾ ದುಬಾರಿಯಾಗಿರುವುದರಿಂದ ಜಿಲ್ಲಾ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಹಾಗೂ ಔಷಧಿ ದೊರೆಯುವಂತೆ ಮಾಡಲು ಸಾಧ್ಯವಿಲ್ಲವೇ; ಇದುವರೆಗೂ ಎಷ್ಟು ರೋಗಿಗಳು ಚಿಕಿತ್ಸೆಗೆ ನೆರವು ಕೇಳಿರುತ್ತಾರೆ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಪ್ರಧಾನಮಂತ್ರಿ ಮಾತೃ ವಂದನಾ ಕಾರ್ಯಕ್ರಮ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೂಲಕ ಅನುಷ್ಠಾನಗೊಳ್ಳುತ್ತಿದ್ದು ಮುಖ್ಯಮಂತ್ರಿಗಳ ಮಾತೃ ವಂದನಾ ಯೋಜನೆಯನ್ನು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಜಾರಿ ಮಾಡುತ್ತಿರಲು ಕಾರಣಗಳೇನು; ಈ ಸೌಲಭ್ಯವನ್ನು ನೇರವಾಗಿ ಫಲಾನುಭವಿ ಖಾತೆಗೆ (DBT) ವರ್ಗಾವಣೆ ಮಾಡಲು ಇರುವ ತೊಂದರೆಗಳೇನು?

----

15/4/750

## ಎತ್ತಿನಹೊಳೆ ಯೋಜನೆ ಕುರಿತು

**1227 ಸಿ ಟಿ ರವಿ (ಚಿಕ್ಕಮಗಳೂರು):**

ಮಾನ್ಯ **ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ರಾಜ್ಯದ ಬಯಲುಸೀಮೆ ಜಿಲ್ಲೆಗಳಿಗೆ ನೀರು ಹರಿಸುವ ಎತ್ತಿನಹೊಳೆ ಯೋಜನೆಗೆ ಅಗತ್ಯವಿರುವ ಹಣ ಎಷ್ಟು;ಯೋಜನೆಯ ಸ್ವರೂಪ ನೀಲಿ ನಕ್ಷೆ ಕುರಿತು ಪೂರ್ಣ ವಿವರ ನೀಡುವುದು;

ಆ) ಯೋಜನೆಗೆ ಅಗತ್ಯವಿರುವ, ಗುರುತಿಸಿರುವ ಮತ್ತು ವಶಪಡಿಸಿಕೊಂಡಿರುವ ಭೂಮಿ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

ಇ) ಯೋಜನೆಗೆ ಟೆಂಡರ್ ಕರೆಯಲಾಗಿದೆಯೆ; ಟೆಂಡರ್‌ನಲ್ಲಿ ಭಾಗವಹಿಸಿದ್ದ ಕಂಪನಿಗಳು ನಮೂದಿಸಿದ್ದ ಟೆಂಡರ್ ಮೊತ್ತ ಎಷ್ಟು; ಯಾವ ಕಂಪನಿಗೆ ಎಷ್ಟು ಮೊತ್ತಕ್ಕೆ ಟೆಂಡರ್ ನೀಡಲಾಗಿದೆ;
ಈ) ಈ ಯೋಜನೆಗೆ ಈವರೆಗೆ ಬಿಡುಗಡೆಮಾಡಿರುವ ಮತ್ತು ವೆಚ್ಚ ಮಾಡಲಾದ ಹಣ ಎಷ್ಟು; ಯಾವ್ಯಾವ ಉದ್ದೇಶಕ್ಕೆ ಹಣ ವೆಚ್ಚ ಮಾಡಲಾಗಿದೆ; ಯೋಜನೆ ಯಾವ ಹಂತದಲ್ಲಿದೆ ಯೋಜನೆಯ ಮುಕ್ತಾಯಕ್ಕೆ ಹಾಕಿಕೊಂಡಿರುವ ಕಾಲಮಿತಿಯೇನು; (ಸಂಪೂರ್ಣ ವಿವರ ನೀಡುವುದು)
ಉ) ರಾಷ್ಟ್ರೀಯ ಹಸಿರು ನ್ಯಾಯಾಧೀಕರಣ ಯೋಜನೆ ಕುರಿತು ನೀಡಿರುವ ಅಭಿಪ್ರಾಯವೇನು?

----

15/4/751

## ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆ

**1228** **ಸಿ ಟಿ ರವಿ (ಚಿಕ್ಕಮಗಳೂರು):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಗೆ ಆಯ್ಕೆಯಾಗಿರುವ ಗ್ರಾಮಗಳ ಅಭಿವೃದ್ಧಿಗೆ ಸರ್ಕಾರದಿಂದ ಇದುವರೆಗೂ ಬಿಡುಗಡೆಯಾಗಿರುವ ಅನುದಾನವೆಷ್ಟು;
ಆ) ಈ ಅನುದಾನದಲ್ಲಿ ವೆಚ್ಚ ಮಾಡಿರುವ ಅನುದಾನವೆಷ್ಟು;
ಇ) ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಗೆ ಪೂರ್ಣ ಅನುದಾನ ನೀಡದೇ ಇರಲು ಕಾರಣಗಳೇನು;
ಈ) ಪೂರ್ಣ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ಹಾಗೂ ಬಾಕಿ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ವಿವರ ಒದಗಿಸುವುದು)

----

15/4/752

## ಅನುದಾನ ಬಿಡುಗಡೆ

**1229** **ಸಿ ಟಿ ರವಿ (ಚಿಕ್ಕಮಗಳೂರು):**

ಮಾನ್ಯ **ಸಣ್ಣ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಕಳೆದ 3 ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಅಭಿವೃದ್ಧಿ ಹಾಗೂ ನಿರ್ವಹಣೆ ಕೆಲಸಗಳಿಗಾಗಿ ಹಂಚಿಕೆ ಮಾಡಿರುವ ಅನುದಾನವೆಷ್ಟು; (ತಾಲ್ಲೂಕುವಾರು ವರ್ಷವಾರು ಮಾಹಿತಿ ಒದಗಿಸುವುದು)
ಆ) ಚಿಕ್ಕಮಗಳೂರು ಜಿಲ್ಲೆಗೆ ಕಳೆದ 3 ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; ಯಾವ ಯಾವ ಯೋಜನೆಯಡಿಯಲ್ಲಿ ಬಿಡುಗಡೆ ಮಾಡಲಾಗಿದೆ; (ತಾಲ್ಲೂಕುವಾರು ವರ್ಷವಾರು ವಿವರ ಒದಗಿಸುವುದು)
ಇ) ಬಿಡುಗಡೆಯಾಗಿರುವ ಅನುದಾನದಲ್ಲಿ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ? (ಕಾಮಗಾರಿಗಳ ವಿವರ ಒದಗಿಸುವುದು)

----

15/4/753

## ಕರಗಡ 2ನೇ ಹಂತದ ಕಾಮಗಾರಿ

**1230** **ಸಿ ಟಿ ರವಿ (ಚಿಕ್ಕಮಗಳೂರು):**

ಮಾನ್ಯ **ಸಣ್ಣ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಬೇಲೂರು ತಾಲ್ಲೂಕು ದೇವಿಕೆರೆಯಿಂದ ಚಿಕ್ಕಮಗಳೂರು ತಾಲ್ಲೂಕು ಬೆಳವಾಡಿ ದೊಡ್ಡಕೆರೆಗೆ ನೀರು ಹರಿಸುವ ಕರಗಡ ಎರಡನೇ ಹಂತದ ಕಾಮಗಾರಿಗೆ ಸರ್ಕಾರ ಮಂಜೂರಾತಿ ನೀಡಿದೆಯೇ;

ಆ) ನೀಡಿದ್ದಲ್ಲಿ, ಎಷ್ಟು ಅಂದಾಜು ಮೊತ್ತದಲ್ಲಿ ಕಾಮಗಾರಿ ನಿರ್ವಹಿಸಲು ಉದ್ದೇಶಿಸಲಾಗಿದೆ; ಇದುವರೆಗೂ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ ಒದಗಿಸುವುದು)

ಇ) ಎರಡನೇ ಹಂತದಲ್ಲಿ ಯಾವ ಕಾಮಗಾರಿ ಕೈಗೊಳ್ಳಲು ಉದ್ದೇಶಿಸಲಾಗಿದೆ? (ವಿವರ ಒದಗಿಸುವುದು)

----

15/4/735

**ಪಂಚಾಯಿತಿಗಳಿರುವ ಹುದ್ದೆಗಳು**

**1231** **ಎಂ.ಪಿ. ರೇಣುಕಾಚಾರ್ಯ (ಹೊನ್ನಾಳಿ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಗ್ರಾಮ ಪಂಚಾಯ್ತಿಗಳಲ್ಲಿ ಪಿ.ಡಿ.ಓ., ಕಾರ್ಯದರ್ಶಿ1 ಹಾಗೂ ಕಾರ್ಯದರ್ಶಿ2 ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)

ಆ)ಸದರಿ ಹುದ್ದೆಗಳು ಕ್ಲಾಸ್2 ದರ್ಜೆಗೆ ಸಮಾನಾರ್ಹವಾದ ಹುದ್ದೆಗಳೆಂದು ಸರ್ಕಾರ ಪರಿಗಣಿಸುವುದೇ; ಖಾಲಿ ಇರುವ ಪಿ.ಡಿ.ಓ. ಹುದ್ದೆಗಳೆಷ್ಟು;

ಇ) ಪಂಚಾಯ್ತಿಗಳನ್ನು ಗ್ರೇಡ್‌ಗಳಾಗಿ ವಿಂಗಡಿಸಲಾಗಿದೆಯೇ; ಇದಕ್ಕೆ ಅನುಸರಿಸುವ ಮಾನದಂಡಗಳೇನು;

ಈ) ಯಾವ ಗ್ರೇಡ್‌ನ ಪಂಚಾಯ್ತಿಗಳಿಗೆ ಪಿ.ಡಿ.ಓ.ಗಳನ್ನು ನಿಯೋಜಿಸಲಾಗುತ್ತದೆ; (ವಿವರ ಒದಗಿಸುವುದು)

ಉ) ಹಾಲಿ ಪಿ.ಡಿ.ಓ.ಗಳ ಪೈಕಿ ಹಲವಾರು ಸಿಬ್ಬಂದಿ ವರ್ಗದವರು ನಿಯೋಜನೆ/ಓ.ಓ.ಡಿ ಆಧಾರದಲ್ಲಿ ಬೇರೆ ಬೇರೆ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರುಗಳ ಸೇವೆಯನ್ನು ಮಾತೃ ಇಲಾಖೆಯ ವಶಕ್ಕೆ ಪಡೆಯಲು ಸರ್ಕಾರಕ್ಕಿರುವ ತೊಂದರೆಗಳೇನು? (ವಿವರ ನೀಡುವುದು)

----

15/4/736

**ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ**

**1232** **ಎಂ.ಪಿ. ರೇಣುಕಾಚಾರ್ಯ (ಹೊನ್ನಾಳಿ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಯಾವ ವರ್ಷದಲ್ಲಿ ಜಾರಿಗೆ ಬಂದಿರುತ್ತದೆ; ಕಳೆದ 3 ವರ್ಷಗಳಿಂದ ಈ ಯೋಜನೆಯಿಂದ ಎಷ್ಟು ಕಿ.ಮೀ. ರಸ್ತೆ ಅಭಿವೃದ್ಧಿಪಡಿಸಲಾಗಿದೆ; (ವಿವರ ನೀಡುವುದು)

ಆ) ಪ್ರಸ್ತುತ ವರ್ಷ ಈ ಯೋಜನೆಯು ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ಈ ವರ್ಷ ಎಷ್ಟು ಕಿ.ಮೀ. ಉದ್ದದ ರಸ್ತೆ ಅಭಿವೃದ್ಧಿಪಡಿಸಲಾಗುವುದು; ಈ ಯೋಜನೆಯು ಜಾರಿಯಲ್ಲಿರದಿದ್ದರೆ ಪುನಃ ಜಾರಿಗೆ ತರುವ

ಆಲೋಚನೆ ಸರ್ಕಾರಕ್ಕಿದೆಯೇ; ಇದರ ಬಗ್ಗೆ ಸರ್ಕಾರದ ಕ್ರಮವೇನು;

ಇ) ಸುವರ್ಣ ಗ್ರಾಮ ಯೋಜನೆ ಯಾವ ವರ್ಷದಲ್ಲಿ ಜಾರಿಗೆ ಬಂದಿರುತ್ತದೆ; ಈ ಯೋಜನೆಯಲ್ಲಿ ಎಷ್ಟು ಗ್ರಾಮ ಅಭಿವೃದ್ಧಿಪಡಿಸಲಾಗಿದೆ; ಪ್ರಸ್ತುತ ಸಾಲಿನಲ್ಲಿ ಈ ಯೋಜನೆಯಲ್ಲಿ ಎಷ್ಟು ಗ್ರಾಮ ತೆಗೆದುಕೊಳ್ಳಲಾಗುವುದು; ಸುವರ್ಣ ಗ್ರಾಮ ಎಂದು ಗುರುತಿಸಲಾಗುವ ಮಾನದಂಡಗಳೇನು; (ವಿವರ ನೀಡುವುದು)

ಈ) ಸುವರ್ಣ ಗ್ರಾಮ ಯೋಜನೆಯಲ್ಲಿ ಕಾಮಗಾರಿ ಮುಗಿದ ಗ್ರಾಮಗಳೆಷ್ಟು; ಬಾಕಿ ಇರುವ ಗ್ರಾಮಗಳೆಷ್ಟು; ಬಾಕಿ ಇರುವ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು)

----

15/4/1453

## ಶಾಲಾ ಕೊಠಡಿಗಳ ಕೊರತೆ

1233 **ಎಂ.ಪಿ. ರೇಣುಕಾಚಾರ್ಯ (ಹೊನ್ನಾಳಿ):**

ಮಾನ್ಯ **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕುಗಳಲ್ಲಿರುವ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಶಾಲೆಗಳಲ್ಲಿ ಕೊಠಡಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಸರ್ಕಾರದ ಕ್ರಮವೇನು; (ವಿವರ ನೀಡುವುದು)

ಆ) ಈ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವಾಗ ಶಿಕ್ಷಕರ ನೇಮಕ ಮಾಡಿಕೊಳ್ಳಲಾಗುವುದು? (ವಿವರ ನೀಡುವುದು)

----

15/4/1454

## ಪ್ರಥಮ ದರ್ಜೆ ಕಾಲೇಜಿನ ಕೊಠಡಿಗಳ ನಿರ್ಮಾಣ

1234 **ಎಂ.ಪಿ. ರೇಣುಕಾಚಾರ್ಯ (ಹೊನ್ನಾಳಿ):**

ಮಾನ್ಯ **ಉನ್ನತ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಹೊನ್ನಾಳಿ ತಾಲ್ಲೂಕಿನಲ್ಲಿರುವ ಪ್ರಥಮ ದರ್ಜೆ ಕಾಲೇಜಿನಲ್ಲಿ ಕೊಠಡಿಗಳ ಕೊರತೆ ಹಾಗೂ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರದ ಮುಂದಿನ ಕ್ರಮವೇನು;

ಆ) ಹೊನ್ನಾಳಿ ನಗರ, ಸಾಸ್ವಿಹಳ್ಳಿ ಹಾಗೂ ನ್ಯಾಮತಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅವಶ್ಯವಿರುವ ಕೊಠಡಿಗಳ ಯಾವಾಗ ಅನುದಾನ ನೀಡಲಾಗುವುದು; (ವಿವರ ನೀಡುವುದು)

ಇ) ಹೊನ್ನಾಳಿ ಮತ್ತು ನ್ಯಾಮತಿಯ ಪ್ರಥಮ ದರ್ಜೆ ಕಾಲೇಜುಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು? (ವಿವರ ನೀಡುವುದು)

----

15/4/1460

## ಕಾಲೇಜು ಕಟ್ಟಡ ನಿರ್ಮಾಣ

1235 **ಎಸ್ ಎನ್ ನಾರಾಯಣಸ್ವಾಮಿ ಕೆ ಎಂ (ಬಂಗಾರಪೇಟೆ):**

ಮಾನ್ಯ **ಉನ್ನತ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಬಂಗಾರ ಪೇಟೆ ವಿಧಾನಸಭಾ ಕ್ಷೇತ್ರದ ಪ್ರಥಮ ದರ್ಜೆ ಕಾಲೇಜು ನಿರ್ಮಾಣಕ್ಕಾಗಿ ರೂಸಾ ಯೋಜನೆಯಲ್ಲಿ ಅನುದಾನ ಮಂಜೂರು ಮಾಡಲಾಗಿದೆಯೇ; ಮಾಡಿದ್ದಲ್ಲಿ ಈವರೆಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ;
ಆ) ಕಟ್ಟಡ ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದರೂ ಸಹ ಅನುದಾನವನ್ನು ಬಿಡುಗಡೆ ಮಾಡದಿರಲು ಕಾರಣವೇನು;
ಇ) ಈ ರೊಸೂ ಯೋಜನೆಯಲ್ಲಿ ಕೈಗೊಳ್ಳಲಾದ ಕಾಮಗಾರಿಗಳ ಸಂಖ್ಯೆ ಎಷ್ಟು; ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಲಾದ ಅನುದಾನದ ಮೊತ್ತವೆಷ್ಟು? (ಕಾಮಗಾರಿಗಳ ಪ್ರಗತಿವಾರು ವಿವರ ನೀಡುವುದು)

----

15/4/772

## ಮೂಲಭೂತ ಸೌಲಭ್ಯ

1236 **ಶಂಕರ್ ಬಿ. ಪಾಟೀಲ್ ಮುನೇನಕೊಪ್ಪ (ನವಲಗುಂದ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ನವಲಗುಂದ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪುನರ್ ವಸತಿ ಯೋಜನೆಯಡಿಯಲ್ಲಿ ಸ್ಥಳಾಂತರಗೊಂಡ ಗ್ರಾಮಗಳಿಗೆ ಇದುವರೆಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;
ಆ) ಬಂದಿದ್ದಲ್ಲಿ, ಸರ್ಕಾರದಿಂದ ಮೂಲಭೂತ ಸೌಲಭ್ಯಗಳನ್ನು ಯಾವಾಗ ಒದಗಿಸಲಾಗುವುದು?( ಸಂಪೂರ್ಣ ವಿವರ ನೀಡುವುದು)

----

15/4/1243

## ಜಲಾಶಯ ಮತ್ತು ನೀರಾವರಿ ವ್ಯವಸ್ಥೆ

1237 **ವಿ. ಸೋಮಣ್ಣ (ಗೋವಿಂದರಾಜನಗರ):**

ಮಾನ್ಯ **ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಚಿಂಚೋಳಿ ತಾಲ್ಲೂಕಿನಲ್ಲಿ ಎಷ್ಟು ಜಲಾಶಯಗಳಿವೆ; ಅವುಗಳು ಯಾವ ಸ್ಥಿತಿಯಲ್ಲಿವೆ;
ಆ) ಚಿಂಚೋಳಿಯಲ್ಲಿರುವ ಯಾವ ಯಾವ ಜಲಾಶಯಗಳಿಂದ ಎಷ್ಟೆಷ್ಟು ಎಕರೆ ಕೃಷಿ ಪ್ರದೇಶಗಳಿಗೆ ನೀರಾವರಿಯನ್ನು ಒದಗಿಸಲಾಗುತ್ತಿದೆ;
ಇ) ಸದರಿ ಜಲಾಶಯಗಳನ್ನು ಮತ್ತಷ್ಟು ಅಭಿವೃದ್ಧಿಗೊಳಿಸುವ ಮೂಲಕ ಇನ್ನೂ ಹೆಚ್ಚು ಕೃಷಿ ಪ್ರದೇಶಗಳಿಗೆ ನೀರಾವರಿಯನ್ನು ಒದಗಿಸಲು ಕ್ರಮ ಕೈಗೊಳ್ಳಲು ಸಾಧ್ಯವಿಲ್ಲವೇ? (ವಿವರ ನೀಡುವುದು)

----

15/4/1244

**ಮಾಜಿ ಮುಖ್ಯಮಂತ್ರಿಯವರ ಹುಟ್ಟೂರು ಅಭಿವೃದ್ಧಿ**

1238 **ವಿ. ಸೋಮಣ್ಣ (ಗೋವಿಂದರಾಜನಗರ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ದಿವಂಗತ ಮಾಜಿ ಮುಖ್ಯಮಂತ್ರಿಯವರಾದ ವಿರೇಂದ್ರ ಪಾಟೀಲರ ಹುಟ್ಟೂರು ಸೇರಿದಂತೆ ಗುಲ್ಬರ್ಗಾ ಜಿಲ್ಲೆಯ ಚಿಂಚೋಳಿ ಅತೀ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;
ಆ) ಬಂದಿದ್ದಲ್ಲಿ, ಈ ಹಿಂದೆ ಸದರಿ ಸ್ಥಳವನ್ನು ಅಭಿವೃದ್ಧಿಗೊಳಿಸಲು ಯಾವ ಯಾವ ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳಲಾಗಿತ್ತು; ಆ ಯೋಜನೆಗಳ ಅಭಿವೃದ್ಧಿ ಕಾಮಗಾರಿ ಯಾವ ಹಂತದಲ್ಲಿವೆ;
ಇ) ಈ ತಾಲ್ಲೂಕಿನಲ್ಲಿ ಎಷ್ಟು ಜಲಾಶಯಗಳಿವೆ; ಯಾವ ಸ್ಥಿತಿಯಲ್ಲಿವೆ; ಆ ಜಲಾಶಯಗಳನ್ನು ಮತ್ತಷ್ಟು ಅಭಿವೃದ್ಧಿಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ?

----

15/4/742

**ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯಕ್ರಮಗಳು**

1239 **ಡಾ|| ಕೆ ಸುಧಾಕರ್ (ಚಿಕ್ಕಬಳ್ಳಾಪುರ):**

ಮಾನ್ಯ **ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಮುಖ ಕೆಲಸ ಮತ್ತು ಜವಾಬ್ದಾರಿಗಳೇನು; (ವಿವರವಾದ ಮಾಹಿತಿಯನ್ನು ಒದಗಿಸುವುದು)
ಆ) ಈ ಇಲಾಖೆಯಿಂದ ಯಾವ ಯಾವ ಕಾರ್ಯಕ್ರಮಗಳಿಗೆ ಸಹಾಯ ಮತ್ತು ಧನ ಸಹಾಯ ದೊರೆಯುತ್ತದೆ;
ಇ) ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇದುವರೆಗೂ ವಿವಿಧ ರೀತಿಯ ಎಷ್ಟು ಕಲಾವಿದರನ್ನು ಹಾಗೂ ವಾಸ್ತುಶಿಲ್ಪಿಗಳನ್ನು ಗುರುತಿಸಲಾಗಿದೆ; (ವಿವರವಾದ ಮಾಹಿತಿಯನ್ನು ಒದಗಿಸುವುದು)
ಈ) ಈ ಇಲಾಖೆಯಿಂದ ದೊರೆಯುವ ಸವಲತ್ತು ಮತ್ತು ನಿಗದಿಪಡಿಸಿರುವ ಅರ್ಹತೆಗಳೇನು? (ವಿವರವಾದ ಮಾಹಿತಿ ನೀಡುವುದು)

----

15/4/743

**ವೈದ್ಯಕೀಯ ಕಾಲೇಜು**

1240 **ಡಾ|| ಕೆ ಸುಧಾಕರ್ (ಚಿಕ್ಕಬಳ್ಳಾಪುರ):**

ಮಾನ್ಯ **ವೈದ್ಯಕೀಯ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಚಿಕ್ಕಬಳ್ಳಾಪುರ ಜಿಲ್ಲೆಗೆ ಮಂಜೂರಾಗಿರುವ ವೈದ್ಯಕೀಯ ಕಾಲೇಜಿಗೆ ಸರ್ಕಾರಿ ಜಾಗ ಮಂಜೂರಾಗಿದೆಯೇ; (ವಿವರಗಳನ್ನು ಒದಗಿಸುವುದು)
ಆ) ವೈದ್ಯಕೀಯ ಕಾಲೇಜು ನಿರ್ಮಾಣಕ್ಕಾಗಿ ಒದಗಿಸಿರುವ ಒಟ್ಟು ಅನುದಾನ ಎಷ್ಟು; ಇದುವರೆಗೂ ಬಿಡುಗಡೆಯಾದ ಅನುದಾನವೆಷ್ಟು? (ಮಾಹಿತಿಯನ್ನು ಒದಗಿಸುವುದು)

----

15/4/1296

**ಆಯುಷ್ಮಾನ್ ಭಾರತ ಯೋಜನೆ**

**1241 ಬಿ.ಎಂ. ಸುಕುಮಾರ್ ಶೆಟ್ಟಿ (ಬೈಂದೂರು):**

ಮಾನ್ಯ **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಆಯುಷ್ಮಾನ್ ಭಾರತ ಯೋಜನೆಯಡಿಯಲ್ಲಿ ಎಷ್ಟು ಫಲಾನುಭವಿಗಳು ಉಚಿತವಾಗಿ ಚಿಕಿತ್ಸೆ ಪಡೆದಿದ್ದಾರೆ; ಅದರಲ್ಲಿ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿರುವ ಫಲಾನುಭವಿಗಳೆಷ್ಟು;

ಆ) ಈ ಯೋಜನೆಯಡಿ ತಾಲ್ಲೂಕು ಮಟ್ಟದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಲಭ್ಯವಿಲ್ಲದಿದ್ದಲ್ಲಿ, ತಾಲ್ಲೂಕು ಮಟ್ಟದ ಖಾಸಗಿ ಆಸ್ಪತ್ರೆಗೆ ಶಿಫಾರಸ್ಸು ನೀಡದೆ ದೂರದ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ದಾಖಲಾಗಬೇಕಾಗಿರುವುದರಿಂದ ಬಡ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

----

15/4/1298

**ಕೆರೆಗಳಿಗೆ ನೀರನ್ನು ಹರಿಸುವುದು**

**1242 ಬಿ.ಎಂ. ಸುಕುಮಾರ್ ಶೆಟ್ಟಿ (ಬೈಂದೂರು):**

ಮಾನ್ಯ **ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವರ್ಷದಿಂದ ವರ್ಷಕ್ಕೆ ಅಂತರ್ಜಲ ಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಆ) ವರಾಹಿ ನದಿಯು ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿಯೇ ಹರಿಯುತ್ತಿದ್ದು ಪಕ್ಕದ ಗ್ರಾಮ ಪಂಚಾಯಿತಿಗಳಲ್ಲಿ ಸಾಕಷ್ಟು ಕೆರೆಗಳಿದ್ದು, ವರಾಹಿ ನೀರನ್ನು ಆ ಕೆರೆಗಳಿಗೆ ಹರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಕಳೆದ ಮೂರು ವರ್ಷಗಳಿಂದ ಈ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಜಲಸಂಪನ್ಮೂಲ ಇಲಾಖೆಯಿಂದ ವಿವಿಧ ಯೋಜನೆಯಡಿ ಬಿಡುಗಡೆಯಾದ ಅನುದಾನ ಎಷ್ಟು; ಕೈಗೊಳ್ಳಲಾಗಿರುವ ಕಾಮಗಾರಿಗಳಾವುವು? (ಸಂಪೂರ್ಣ ಮಾಹಿತಿ ನೀಡುವುದು)

----

15/4/1249

**ಆಯುಷ್ಮಾನ್ ಭಾರತ್ ಯೋಜನೆ**

**1243 ಸುನಿಲ್ ಬಿಳಿಯ ನಾಯಕ್ (ಭಟ್ಕಳ):**

ಮಾನ್ಯ **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಕಾರ್ಡ್‌ಗಳು ವಿತರಣೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;
ಆ) ಬಂದಿದ್ದಲ್ಲಿ, ಕಾರ್ಡ್‌ಗಳನ್ನು ಹಂಚಿಕೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು;
ಇ) ಭಟ್ಕಳಹೊನ್ನಾವರ ಮತಕ್ಷೇತ್ರದಲ್ಲಿ ಈವರೆಗೂ ಹಂಚಿಕೆಯಾದ ಕಾರ್ಡ್‌ಗಳು ಮತ್ತು ಬಾಕಿಯಿರುವ ಕಾರ್ಡ್‌ಗಳೇಷ್ಟು? (ವಿವರ ನೀಡುವುದು)

----

15/4/1471

**ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ**

1244 **ವಿ ಸುನಿಲ್ ಕುಮಾರ್ (ಕಾರ್ಕಳ):**

ಮಾನ್ಯ **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಪ್ರಮಾಣ ಕಡಿಮೆಯಾಗುತ್ತಿದ್ದು, ಸರ್ಕಾರಿ ಶಾಲೆಗಳತ್ತ ವಿದ್ಯಾರ್ಥಿಗಳನ್ನು ಸೆಳೆಯುವಲ್ಲಿ ಸರ್ಕಾರ ಹಾಕಿಕೊಂಡ ಕಾರ್ಯಕ್ರಮಗಳೇನು;
ಆ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಸರ್ಕಾರಿ ಕಿರಿಯ, ಹಿರಿಯ ಪ್ರಾಥಮಿಕ ಶಾಲೆಗಳು ಹಾಗೂ ಸರ್ಕಾರಿ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ; (ತಾಲ್ಲೂಕುವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು)
ಇ) ಈ ಶಾಲೆಗಳಲ್ಲಿ ಎಷ್ಟು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ; ಈ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ/ ಅನುದಾನಿತ ಶಾಲೆಗಳಿಗೆ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಶಾಲೆಗಳ ಹೆಸರು ಸಹಿತ ಸಂಪೂರ್ಣ ವಿವರಗಳನ್ನು ಒದಗಿಸುವುದು)
ಈ) ದಾಖಲಾತಿ ಕಡಿಮೆ ಇರುವ/ದಾಖಲಾತಿ ಇಲ್ಲದೇ ಇರುವ ಶಾಲೆಗಳ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗುತ್ತಿದೆಫಿ?

----

15/4/1472

**ಗ್ರಾಮ ಪಂಚಾಯತಿಗಳಲ್ಲಿ ಅವ್ಯವಹಾರ**

1245 **ವಿ ಸುನಿಲ್ ಕುಮಾರ್ (ಕಾರ್ಕಳ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಗ್ರಾಮ ಪಂಚಾಯತಿಗಳಲ್ಲಿ ನಡೆಯುವ ಅವ್ಯವಹಾರಗಳನ್ನು ತಡೆಯುವಲ್ಲಿ ಸರ್ಕಾರ ಕೈಗೊಂಡಿರುವ ಪಾರದರ್ಶಕ ಕ್ರಮಗಳೇನು;
ಆ) ಕಳೆದ 3 ವರ್ಷಗಳಿಂದ ಈವರೆಗೆ ಗ್ರಾಮ ಪಂಚಾಯತಿಗಳಲ್ಲಿ ನಡೆದ ಎಷ್ಟು ಅವ್ಯವಹಾರ ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ; ಯಾವ ಯಾವ ಯೋಜನೆಯಲ್ಲಿ ಅವ್ಯವಹಾರಗಳು ನಡೆದಿದೆ; (ಜಿಲ್ಲಾವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು)
ಇ) ಅವ್ಯವಹಾರಗಳಲ್ಲಿ ಭಾಗಿಯಾದ ಎಷ್ಟು ಮಂದಿಯ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

----

15/4/1473

**ಪಶ್ಚಿಮ ವಾಹಿನಿ ಯೋಜನೆ**

**1246 ವಿ ಸುನಿಲ್ ಕುಮಾರ್ (ಕಾರ್ಕಳ):**

ಮಾನ್ಯ **ಸಣ್ಣ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ರಾಜ್ಯದಲ್ಲಿ ಪಶ್ಚಿಮ ವಾಹಿನಿ ಯೋಜನೆಯನ್ನು ಯಾವಾಗ ಜಾರಿಗೆ ತರಲಾಯಿತು; ಯಾವ ಯಾವ ಜಿಲ್ಲೆಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ;
ಆ)ಕಳೆದ ಮೂರು ವರ್ಷಗಳಿಂದ ಈ ಯೋಜನೆಗೆ ಮೀಸಲಿಟ್ಟ ಅನುದಾನ ಎಷ್ಟು; ಈವರೆಗೆ ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ;
ಇ) ಪಶ್ಚಿಮ ವಾಹಿನಿ ಯೋಜನೆಯಡಿ ಈವರೆಗೆ ಉಡುಪಿ ಜಿಲ್ಲೆಯಲ್ಲಿ ಎಷ್ಟು ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ; (ತಾಲ್ಲೂಕುವಾರು ಸಂಪೂರ್ಣ ವಿವರಗಳನ್ನು ನೀಡುವುದು);
ಈ) ಎಷ್ಟು ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ಮುಗಿದಿರುತ್ತದೆ; ಟೆಂಡರ್‌ಗೆ ಬಾಕಿಯಿರುವ ಕಾಮಗಾರಿಗಳು ಎಷ್ಟು; ಅವುಗಳಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿರುತ್ತವೆ; ಎಷ್ಟು ಕಾಮಗಾರಿಗಳು ಪ್ರಕ್ರಿಯೆಯಲ್ಲಿರುತ್ತದೆ? (ಉಡುಪಿ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ವಿವರಗಳನ್ನು ನೀಡುವುದು)

----

15/4/761

**ಮಹಿಳಾ ಪ್ರಥಮ ದರ್ಜೆ ಕಾಲೇಜು**

**1247 ಜಿ ಹೆಚ್ ತಿಪ್ಪಾರೆಡ್ಡಿ (ಚಿತ್ರದುರ್ಗ):**

ಮಾನ್ಯ **ಉನ್ನತ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ಚಿತ್ರದುರ್ಗ ನಗರಕ್ಕೆ ಮಹಿಳಾ ಪ್ರಥಮ ದರ್ಜೆ ಕಾಲೇಜು ಮಂಜೂರಾಗಿದ್ದು ಯಾವಾಗ;
ಆ) ಪ್ರಸ್ತುತ ಕಾಲೇಜು ಯಾವ ಸ್ಥಳದಲ್ಲಿ ನಡೆಯುತ್ತಿದೆ; ಈ ಕಾಲೇಜಿಗೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ (ಸಂಪೂರ್ಣ ವಿವರ ನೀಡುವುದು)?

----

15/4/1463

**ದೂರ ಶಿಕ್ಷಣ ವ್ಯವಸ್ಥೆ**

**1248 ಉಮಾನಾಥ ಎ. ಕೋಟಿಯನ್ (ಮೂಡಬಿದರೆ):**

ಮಾನ್ಯ **ಉನ್ನತ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : -

ಅ) ರಾಜ್ಯದಲ್ಲಿರುವ ದೂರ ಶಿಕ್ಷಣ/ ಮುಕ್ತ ವಿಶ್ವವಿದ್ಯಾಲಯಗಳ ಶೈಕ್ಷಣಿಕ ವ್ಯವಸ್ಥೆಗಳಲ್ಲಿ ಸುಧಾರಣೆ ಮತ್ತು ಗುಣಮಟ್ಟ ವರ್ಧನೆಗಾಗಿ ಸರ್ಕಾರ ಕೈಗೊಂಡ ಕ್ರಮಗಳು ಯಾವುವು; ರಾಜ್ಯದಲ್ಲಿ ದೂರ ಶಿಕ್ಷಣ ವ್ಯವಸ್ಥೆ ಮೂಲಕ ಶಿಕ್ಷಣ ಪಡೆಯುತ್ತಿರುವವರ ಸಂಖ್ಯೆಯೆಷ್ಟು ( ವಿಶ್ವವಿದ್ಯಾಲಯವಾರು ಎರಡು ವರ್ಷಗಳ ಮಾಹಿತಿ ನೀಡುವುದು)
ಆ) ಸದರಿ ವಿಶ್ವವಿದ್ಯಾಲಯಗಳು ನಡೆಸುತ್ತಿರುವ ಪರೀಕ್ಷೆಗಳ ಫಲಿತಾಂಶವನ್ನು ಸಕಾಲಿಕವಾಗಿ ಪ್ರಕಟಿಸುವಲ್ಲಿನ ಕ್ರಮಗಳೇನು;

ಇ) ಪಿಹೆಚ್‌ಡಿ ಪದವಿಗಾಗಿ ಇರುವ ಸೌಲಭ್ಯ ವ್ಯವಸ್ಥೆಗಳು ಮತ್ತು ಅರ್ಹ ವಿದ್ಯಾರ್ಥಿಗಳು ಸದರಿ ಅಧ್ಯಯನದಲ್ಲಿ ಭಾಗಿಗಳಾಗಲು ಅನುಸರಿಸುತ್ತಿರುವ ಮಾನದಂಡಗಳು ಪ್ರೋತ್ಸಾಹಕ ಕ್ರಮಗಳು ಯಾವುವು?

----

15/4/1464

**ಶಾಲೆ ಕಟ್ಟಡಗಳು**

1249 **ಉಮಾನಾಥ ಎ. ಕೋಟಿಯನ್ (ಮೂಡಬಿದರೆ):**

ಮಾನ್ಯ **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಮೂಡಬಿದ್ರೆ ತಾಲ್ಲೂಕು ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕಟ್ಟಡ ಮತ್ತಿತರ ಮೂಲಸೌಲಭ್ಯಗಳ ಕೊರತೆಯನ್ನು ಎದುರಿಸುತ್ತಿರುವ ಶಾಲೆಗಳನ್ನು ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ಆ ಕುರಿತಾದ ವಿವರಗಳೇನು;

ಆ) ಬಡ ಮಧ್ಯಮ ವರ್ಗದ ಜನರು ಆಶ್ರಯಿಸಿಕೊಂಡಿರುವ ಮತ್ತು ಶಿಕ್ಷಣ ನೀಡಿಕೆಯಲ್ಲಿ ಮನ್ನಣೆ ಪಡೆದಿರುವ ಈ ಶಾಲೆಗಳಲ್ಲಿರುವ ಸಿಬ್ಬಂದಿ ಕೊರತೆಯನ್ನು ನಿವಾರಿಸುವಲ್ಲಿ ಸರ್ಕಾರದ ಶೀಘ್ರಗತಿಯ ಕ್ರಮಗಳೇನು;

ಇ) ಸದರಿ ಶಾಲಾ ಶಿಕ್ಷಕರುಗಳಿಗೆ ವಹಿಸಿಕೊಡಲಾಗುತ್ತಿರುವ ಪಠ್ಯೇತರ ಕೆಲಸ ಕಾರ್ಯಗಳನ್ನು ಹೊರತುಪಡಿಸಿ ಪೂರ್ಣ ಪ್ರಮಾಣದಲ್ಲಿ ಶಾಲಾ ವ್ಯಾಪ್ತಿಯ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗುವಂತೆ ಮಾಡಲು ಸೂಕ್ತ ಕ್ರಮ ಜರುಗಿಸಿ ಶೈಕ್ಷಣಿಕ ಗುಣವರ್ಧನೆಗೆ ಕ್ರಮ ಜರುಗಿಸಲಾಗುವುದೇ?

----

15/4/1465

**ಸಿಬ್ಬಂದಿಗಳ ಕೊರತೆ**

1250 **ಉಮಾನಾಥ ಎ. ಕೋಟಿಯನ್ (ಮೂಡಬಿದರೆ):**

ಮಾನ್ಯ **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸರ್ಕಾರದ ವಿವಿಧ ದರ್ಜೆಯ ವೈದ್ಯಕೀಯ ಸೇವಾ ಕೇಂದ್ರಗಳಲ್ಲಿ ಕೊರತೆ ಇರುವ ಸಿಬ್ಬಂದಿಗಳ ಸಂಖ್ಯೆಯೆಷ್ಟು (ವಿವರ ನೀಡುವುದು);

ಆ) ಸದರಿ ಹುದ್ದೆಗಳನ್ನು ಭರ್ತಿಮಾಡಿ ಆರೋಗ್ಯ ಸೇವೆಗಳನ್ನು ಜನರಿಗೆ ಒದಗಿಸಿಕೊಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು;

ಇ) ಅಂಬ್ಯುಲೆನ್ಸ್ ವಾಹನಗಳನ್ನು ಎಷ್ಟು ಆಸ್ಪತ್ರೆಗಳಿಗೆ ಒದಗಿಸಿಕೊಡಲಾಗಿದೆ; ಕೊರತೆ ಇರುವ ವಾಹನಗಳ ಸಂಖ್ಯೆ ಮತ್ತು ಅವುಗಳನ್ನು ಪೂರೈಸಿಕೊಡುವ ದಿಸೆಯಲ್ಲಿ ಇಲಾಖೆಯ ಶೀಘ್ರ ಕ್ರಮಗಳೇನು?

----

15/4/1466

**ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವಿಕೆ**

1251 **ಉಮಾನಾಥ ಎ. ಕೋಟಿಯನ್ (ಮೂಡಬಿದರೆ):**

ಮಾನ್ಯ **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಮೂಡಬಿದ್ರೆಯಲ್ಲಿರುವ ಸಮುದಾಯ ಆರೋಗ್ಯ ಕೇಂದ್ರವು ಗರಿಷ್ಠ ಪ್ರಮಾಣದಲ್ಲಿ ಚಿಕಿತ್ಸಾ ಸೇವೆಗಳನ್ನು ನೀಡುತ್ತಿದ್ದು, ಹೆಚ್ಚಿನ ಮೂಲ ಸೌಲಭ್ಯಗಳ ಕೊರತೆಯಿರುವುದರಿಂದ ತಾಲ್ಲೂಕು ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಆಸ್ಪತ್ರೆಗೆ ಒದಗಿಸಲಾಗಿರುವ ಸಿಬ್ಬಂದಿ, ವೈದ್ಯರುಗಳ ಸಂಖ್ಯಾ ಪ್ರಮಾಣ, ಆದ್ಯತಾ ಕ್ರಮಗಳೇನು;

ಇ) ಗ್ರಾಮಾಂತರ ಪ್ರದೇಶಗಳಿಂದ ಕೂಡಿರುವ ಈ ಆಸ್ಪತ್ರೆಗೆ 30 ವರ್ಷಗಳಿಗಿಂತಲೂ ಹಳೆಯ ಕೆಟ್ಟು ಹೋಗಿರುವ ಆಂಬುಲೆನ್ಸ್ ಇದ್ದು ನೂತನ ಅಂಬ್ಯುಲೆನ್ಸ್ ಒದಗಿಸಲು ಸರ್ಕಾರ ತ್ವರಿತ ಕ್ರಮ ಜರುಗಿಸುವುದೇ?

----

**15/4/1238**

**ಏತ ನೀರಾವರಿ ಯೋಜನೆ**

**1252 ಉಮೇಶ್ ವಿ ಕತ್ತಿ (ಹುಕ್ಕೇರಿ):**

ಮಾನ್ಯ **ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಏತ ನೀರಾವರಿ ಯೋಜನೆಗಳನ್ನು ನೀರು ಬಳಕೆದಾರರ ಸಂಘಗಳಿಂದ ಎನ್.ಜಿ.ಓ.ಗಳಿಂದ ಅಥವಾ ನುರಿತ ಗುತ್ತಿಗೆದಾರರಿಂದ ನಿರ್ವಹಣೆ ಮಾಡಲು ಗುತ್ತಿಗೆ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ (ವಿವರ ನೀಡುವುದು);

ಆ) ಹುಕ್ಕೇರಿ ತಾಲ್ಲೂಕಿನಲ್ಲಿರುವ ಕೊಟಬಾಗಿ ಏತ ನೀರಾವರಿ ಯೋಜನೆ, ಕುರಣಿ ಏತ ನೀರಾವರಿ ಯೋಜನೆ, ಕೋಚರಿ ಏತ ನೀರಾವರಿ ಯೋಜನೆ, ದಡ್ಡಿ ಏತ ನೀರಾವರಿ ಯೋಜನೆ ಘೋಡಗೇರಿ ಏತ ನೀರಾವರಿ ಯೋಜನೆಗಳನ್ನು ನಿರ್ವಹಣೆ ಮಾಡಲು ಗುತ್ತಿಗೆ ನೀಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು)?

----

**15/4/1239**

**ತ್ಯಾಜ ನಿರ್ವಹಣೆ ಘಟಕ**

**1253 ಉಮೇಶ್ ವಿ ಕತ್ತಿ (ಹುಕ್ಕೇರಿ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಸೂಕ್ತ ತ್ಯಾಜ್ಯ ನಿರ್ವಹಣೆ ಘಟಕಗಳಲ್ಲಿ ನೈರ್ಮಲ್ಯಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗ್ರಾಮೀಣ ಮಟ್ಟದಲ್ಲಿ ತಾಜ್ಯ ನಿರ್ವಹಣೆ ಘಟಕ ಸ್ಥಾಪಿಸಲು ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಉದ್ದೇಶಿಸಲಾಗಿದೆಯೇ;

ಇ) ಹಾಗಿದ್ದಲ್ಲಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ತ್ಯಾಜ್ಯ ಘಟಕ ಸ್ಥಾಪನೆಗೆ ಯಾವ ಯೋಜನೆಯನ್ನು ಹಾಕಿಕೊಳ್ಳಲಾಗಿದೆ (ಯೋಜನೆಯ ವಿವರ ನೀಡುವುದು);

ಈ) ಈ ಯೋಜನೆಯಡಿ ಈಗಾಗಲೇ ಯಾವ ಯಾವ ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ; ಅದಕ್ಕಾಗಿ ಮಂಜೂರಾದ ಅನುದಾನವೆಷ್ಟು; ಬಿಡುಗಡೆ ಮಾಡಿದ ಅನುದಾನವೆಷ್ಟು; ಪೂರ್ತಿಗೊಂಡ ಕಾಮಗಾರಿಗಳೆಷ್ಟು (ಗ್ರಾಮವಾರು ವಿವರ ನೀಡುವುದು)?

----

15/4/1240

**ಆರೋಗ್ಯ ಕೇಂದ್ರಕ್ಕೆ ಕಟ್ಟಡ**

1254 **ಉಮೇಶ್ ವಿ ಕತ್ತಿ (ಹುಕ್ಕೇರಿ):**

ಮಾನ್ಯ **ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ಬೆಳಗಾವಿ ಜಿಲ್ಲೆ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಟ್ಟಿ ಆಲೂರ ಗ್ರಾಮದಲ್ಲಿರುವ ಉಪ ಆರೋಗ್ಯ ಕೇಂದ್ರವನ್ನು ಹಿಡಕಲ್ ಜಲಾಶಯದ ಹತ್ತಿರವಿರುವ ನೀರಾವರಿ ನಿಗಮದ ಕಟ್ಟಡಕ್ಕೆ ಸ್ಥಳಾಂತರಿಸಲು ಕಟ್ಟಡವನ್ನು ಆರೋಗ್ಯ ಇಲಾಖೆಗೆ ಒದಗಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸದರಿ ನಿಗಮದ ಕಟ್ಟಡವನ್ನು ಆರೋಗ್ಯ ಇಲಾಖೆಗೆ ಹಸ್ತಾಂತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ;

ಇ) ಸದರಿ ನಿಮಗದ ಕಟ್ಟಡವನ್ನು ಆರೋಗ್ಯ ಇಲಾಖೆಗೆ ಯಾವಾಗ ಹಸ್ತಾಂತರಿಸಲು ಉದ್ದೇಶಿಸಲಾಗಿದೆ (ವಿವರ ನೀಡುವುದು)?

----

15/4/1241

**ಆಂಬ್ಯುಲೆನ್ಸ್ ಸೇವೆ**

1255 **ಉಮೇಶ್ ವಿ ಕತ್ತಿ (ಹುಕ್ಕೇರಿ):**

ಮಾನ್ಯ **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ರಾಜ್ಯದಲ್ಲಿ ಎಷ್ಟು ಸ್ಥಳಗಳಲ್ಲಿ 108 ಆಂಬ್ಯುಲೆನ್ಸ್‌ಗಳ ಮೂಲಕ ಸೇವೆ ಒದಗಿಸಲಾಗುತ್ತಿದೆ ಹಾಗೂ ಇನ್ನೂ ಎಷ್ಟು ಬೇಡಿಕೆ ಇದೆ ; ಇದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು);

ಇ) ಇನ್ನೂ ಹೆಚ್ಚಿನ ಆಂಬ್ಯುಲೆನ್ಸ್ ಸೇವೆಗಳನ್ನು ವಿಸ್ತರಿಸಲು ಸರ್ಕಾರ ಉದ್ದೇಶಿಸಿದೆಯೇ; ಹಾಗಿದ್ದಲ್ಲಿ, ಎಷ್ಟು ಆಂಬ್ಯುಲೆನ್ಸ್‌ಗಳನ್ನು ಖರೀದಿಸಲು ಮತ್ತು ಯಾವ ಯಾವ ಸ್ಥಳಗಳಲ್ಲಿ ನಿಯುಕ್ತಿಗೊಳಿಸಲು ಉದ್ದೇಶಿಸಲಾಗಿದೆ? (ಪೂರ್ಣ ವಿವರ ನೀಡುವುದು)

----

15/4/1242

**ಬೋಧಕರ/ಉಪನ್ಯಾಸಕರ ಭರ್ತಿ**

1256 **ಉಮೇಶ್ ವಿ ಕತ್ತಿ (ಹುಕ್ಕೇರಿ):**

ಮಾನ್ಯ **ಉನ್ನತ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ರಾಜ್ಯದಲ್ಲಿರುವ ಪ್ರಥಮ ದರ್ಜೆ ಪದವಿ ಕಾಲೇಜುಗಳ ಸಂಖ್ಯೆಯೆಷ್ಟು;

ಆ) ಈ ಕಾಲೇಜುಗಳಿಗೆ ಮಂಜೂರಾಗಿರುವ ಒಟ್ಟು ಬೋಧಕರ / ಉಪನ್ಯಾಸಕರ ಹುದ್ದೆಗಳೆಷ್ಟು; ಅವುಗಳ ಪೈಕಿ ಭರ್ತಿ ಮಾಡಿದ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು (ವಿವರ ನೀಡುವುದು);

ಇ) ಈ ಕಾಲೇಜುಗಳಲ್ಲಿರುವ ಒಟ್ಟು ವಿದ್ಯಾರ್ಥಿಗಳೆಷ್ಟು; ಬೋಧಕರ /ಉಪನ್ಯಾಸಕರ ಮತ್ತು ವಿದ್ಯಾರ್ಥಿಗಳ ಅನುಪಾತ ಎಷ್ಟಿರಬೇಕಾಗಿರುತ್ತದೆ; ಪ್ರಸ್ತುತ ಅನುಪಾತ ಯಾವ ಪ್ರಮಾಣದಲ್ಲಿರುತ್ತದೆ;

ಈ) ಹುಕ್ಕೇರಿ ಪಟ್ಟಣದಲ್ಲಿರುವ ಪ್ರಥಮ ದರ್ಜೆ ಪದವಿ ಕಾಲೇಜಿನಲ್ಲಿ ಇತಿಹಾಸ , ಸಮಾಜಶಾಸ್ತ್ರ ಮತ್ತು ಅರ್ಥಶಾಸ್ತ್ರ ಬೋಧಕರ/ಉಪನ್ಯಾಸಕರ ಹುದ್ದೆಗಳು ಖಾಲಿ ಇದ್ದು, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; ಈ ಹುದ್ದೆಗಳನ್ನು ಭರ್ತಿ ಮಾಡಲು ಕಾಲಮಿತಿಯನ್ನು ಹಾಕಿಕೊಳ್ಳಲಾಗಿದೆಯೇ?

----

15/4/241

**ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ T.G.T ಶಿಕ್ಷಕರ ಬಗ್ಗೆ**

**1257 ಡಿ. ವೇದವ್ಯಾಸ ಕಾಮತ್ (ಮಂಗಳೂರು ನಗರ ದಕ್ಷಿಣ):**

ಮಾನ್ಯ **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ T.G.T ಶಿಕ್ಷಕರನ್ನು (ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್2) ಪ್ರೌಢಶಾಲಾ ಶಿಕ್ಷಕರೆಂದು ಪರಿಗಣಿಸುವ ಪ್ರಸ್ತಾವನೆಯನ್ನು ಸಲ್ಲಿಸಿರುವುದು ಸಾರ್ಕರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಶಿಕ್ಷಕರನ್ನು ಪ್ರೌಢಶಾಲಾ ಶಿಕ್ಷಕರೆಂದು ಪರಿಗಣಿಸಲು ಸರ್ಕಾರದ ಹಂತದಲ್ಲಿ ಕ್ರಮ ಕೈಗೊಳ್ಳಲಾಗಿದೆಯೇ;

ಇ) ಹಾಗಿದ್ದಲ್ಲಿ, ಈ T.G.T ಶಿಕ್ಷಕರನ್ನು ಪ್ರೌಢಶಾಲಾ ಶಿಕ್ಷಕರೆಂದು ಪರಿಗಣಿಸಲು ತೆಗೆದುಕೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

----

15/4/1299

**ಹೊಸದಾಗಿ ಪದವಿಪೂರ್ವ ಕಾಲೇಜು**

**1258 ಟಿ. ವೆಂಕಟರಮಣಯ್ಯ (ಅಪ್ಪ ಕರನಹಳ್ಳಿ ಟಿ.ವೆಂಕಟೇಶ್) (ದೊಡ್ಡಬಳ್ಳಾಪುರ):**

ಮಾನ್ಯ **ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) ದೊಡ್ಡಬಳ್ಳಾಪುರ ತಾಲ್ಲೂಕಿನ ಸಾಸಲು ಹೋಬಳಿಯಲ್ಲಿ ಹೊಸದಾಗಿ ಪದವಿಪೂರ್ವ ಕಾಲೇಜು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

----

15/4/777

**ರಸ್ತೆ ನಿರ್ವಹಣೆ**

**1259 ವಿಶ್ವೇಶ್ವರ ಹೆಗಡೆ ಕಾಗೇರಿ (ಶಿರಸಿ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **: -**

ಅ) 2017-18 ಮತ್ತು 2018-19 ರಲ್ಲಿ ಶಿರಸಿಸಿದ್ದಾಪುರ ಕ್ಷೇತ್ರ ವ್ಯಾಪ್ತಿಯಲ್ಲಿಯ ಜಿಲ್ಲಾ ಪಂಚಾಯತ್ ರಸ್ತೆಗಳ ನಿರ್ವಹಣೆಗೆ (3054 ಲೆಕ್ಕ ಶೀರ್ಷಿಕೆ ಅಡಿಯಲ್ಲಿ) ನೀಡಿರುವ ಅನುದಾನವೆಷ್ಟು;

ಆ) ಇವುಗಳಲ್ಲಿ ಎಷ್ಟು ಕಾಮಗಾರಿಗಳು ಬಾಕಿ ಇವೆ; ಪೂರ್ಣಗೊಂಡ ಕಾಮಗಾರಿಗಳಿಗೆ ಹಣ ನೀಡಲಾಗಿದೆಯೇ;

ಇ) ಹಣ ಬಿಡುಗಡೆಯಾಗದೇ ಗುತ್ತಿಗೆದಾರರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಯಾವ ಕಾಲಮಿತಿಯಲ್ಲಿ ಸರ್ಕಾರ ಹಣ ಮಂಜೂರು ಮಾಡಲು ಕ್ರಮ ಕೈಗೊಳ್ಳಲಿದೆ? (ವಿವರ ಒದಗಿಸುವುದು)

----

**ಬೆಂಗಳೂರು - 560001.** **ಎಂ.ಕೆ. ವಿಶಾಲಾಕ್ಷಿ,**

**ಗುರುವಾರ, 25ನೇ ಜುಲೈ, 2019.** **ಕಾರ್ಯದರ್ಶಿ (ಪ್ರ)**